293.	Vijayalakshmi Prakashana, Dharwad	1,120-00
294.	Vishwanatha Prakashana, Sirsi	120-00
295.	Vishwaroopachar N. Bangalore	320-00
296.	World Book Stall, Bangalore	22,390-00
	Total	Rs. 54,99,852-00

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹೊಸ ಪಶುಚಿಕಿತ್ಸಾಲಯ ಕೇಂದ್ರ

995 (378): ಶ್ರೀ ಸೋಮಪ್ಪ ಸುವರ್ಣ (ಮೂಡಬಿದರೆ):–

ಮಾನ್ಯ ಪಶು ಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಈ ವರ್ಷ ಎಲ್ಲೆಲ್ಲಿ ಹೊಸ ಸರ್ಕಾರಿ ಪಶು ಚಿಕಿತ್ಸಾ ಕೇಂದ್ರಗಳನ್ನು ತೆರೆಯಲಾಗಿದೆ;

ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಈ ವರ್ಷ ಎಷ್ಟು ಪಶು ಚಿಕಿತ್ಸಾ ಕೇಂದ್ರಗಳನ್ನು ಪಶು ಚಿಕಿತ್ಸಾಲಯವಾಗಿ ಮೇಲ್ದರ್ಜೆಗೇರಿಸಲಾಗಿದೆ;

ಇ) ದಕ್ಷಿಣ ಕನ್ನಡ ಜಿಲ್ಲೆಗೆ ಹೊಸ ಮಂಜೂರಾತಿಯಲ್ಲಿ ತೊಂದರೆ ಉಂಟಾದ ಮನವಿಯ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ;

ಈ) ಹಾಗಿದ್ದಲ್ಲಿ 93-94ರಲ್ಲಿ ಹೊಸ ಚಿಕಿತ್ಸಾ ಕೇಂದ್ರಗಳ ಮಂಜೂರಾತಿಯ ಸಮಯದಲ್ಲಿ ಕೊರತೆಯನ್ನು ತುಂಬಲು ಏನು ಕ್ರಮ ಕೈಗೊಳ್ಳಲಾಗುವುದು ?

ಶ್ರೀ ಕೆ.ಎನ್. ನಾಗೇಗೌಡ (ಪಶು ಸಂಗೋಪನಾ ರಾಜ್ಯ ಸಚಿವರು):–

ಅ) 92-93ನೇ ಸಾಲಿಗೆ ಹೊಸ ಪಶು ಚಿಕಿತ್ಸಾ ಕೇಂದ್ರಗಳನ್ನು ತೆರೆಯಲು ಸ್ಥಳ ಗುರುತಿಸುವ ಕಾರ್ಯ ಪರಿಶೀಲನೆಯಲ್ಲಿದೆ.

ಆ) ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ.

ಇ) ಉದ್ಭವಿಸುವುದಿಲ್ಲ.

ಈ) ಪಶು ಚಿಕಿತ್ಸಾ ಕೇಂದ್ರಗಳನ್ನು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ರಾಜ್ಯದ ಇತರೆ ಜಿಲ್ಲೆಗಳೊಂದಿಗೆ ಮಂಜೂರು ಮಾಡಲಾಗುವುದು.

ರಾಯಚೂರು ಎಲ್.ವಿ.ಡಿ. ಕಾಲೇಜಿನಲ್ಲಿ ಪರೀಕ್ಷೆಗಳನ್ನು ಮುಂದೂಡಲು ವಿದ್ಯಾರ್ಥಿಗಳಿಂದ ಮನವಿ.

996 (109): ಶ್ರೀ ಬಿ.ಎಸ್. ಯಡಿಯೂರಪ್ಪ (ಶಿಕಾರಿಪುರ):–

ಮಾನ್ಯ ಉನ್ನತ ಶಿಕ್ಷಣ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಯಚೂರು ಎಲ್.ವಿ.ಡಿ. ಕಾಲೇಜಿನಲ್ಲಿ ಸರಿಯಾದ ಪಾಠ ಪ್ರವಚನ ನಡೆಯದೆ ಇರು